## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1192 |
| ಸದಸ್ಯರ ಹೆಸರು | : | ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 20-12-2018 |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಇರುವ ಶಿಕ್ಷಕರ ಸಂಖ್ಯೆ ಎಷ್ಟು; ಹಾಲಿ ಖಾಲಿ ಇರುವ ಶಿಕ್ಷಕರ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು) | ಪ್ರಾಥಮಿಕ ಶಾಲಾ ಶಿಕ್ಷಕರ ಮಂಜೂರಾದ ಒಟ್ಟು ಹುದ್ದೆಗಳು-188540. ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ-167478 ಇದರಲ್ಲಿ ಖಾಲಿ ಹುದ್ದೆಗಳ ಸಂಖ್ಯೆ:21062,<br>ಪ್ರೌಢ ಶಾಲಾ ಶಿಕ್ಷಕರ ಮಂಜೂರಾದ ಒಟ್ಟು ಹುದ್ದೆಗಳು-52360. ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ-46860. ಇದರಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ:5,500. |
| ಆ. | ಈ ಶಿಕ್ಷಕರ ಹುದ್ದೆಗಳು ಎಷ್ಟು ವರ್ಷಗಳಿಂದ ಖಾಲಿ ಇವೆ; ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಈ ಹುದ್ದೆಗಳು ವಿವಿಧ ವರ್ಷಗಳಲ್ಲಿ ನಿವೃತ್ತಿ, ಬಡ್ತಿ, ರಾಜೀನಾಮೆ, ಸ್ವಯಂ ನಿವೃತ್ತಿಯಿಂದ ತೆರವಾಗಿರುತ್ತವೆ.<br>ಹಿರಿಯ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಗೆ ಸಂಬಂದಿಸಿದಂತೆ 2017-18ನೇ ಸಾಲಿನಲ್ಲಿ 10000 ಹುದ್ದೆಗಳಿಗೆ ನೇಮಕಾತಿ ಪರೀಕ್ಷೆ ನಡೆಸಿದ್ದು, ಇದರಲ್ಲಿ 3389 ಅಭ್ಯರ್ಥಿಗಳು ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ ಹಾಗೂ 2018-19ನೇ ಸಾಲಿಗೆ 4000 ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲು ಅನುಮೋದನೆ ನೀಡಲಾಗಿದೆ.<br>ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ 2017-18ನೇ ಸಾಲಿನಲ್ಲಿ ಖಾಲಿ ಇರುವ 1689 ಶಿಕ್ಷಕರ ಹುದ್ದೆಗಳನ್ನು, ನೇರನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲಾಗಿದೆ. 3590 ಹುದ್ದೆಗಳನ್ನು ಭರ್ತಿ ಮಾಡಲು ಪರಿಶೀಲಿಸಲಾಗುತ್ತಿದೆ, 1910 ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಕ್ರಮವಹಿಸಲಾಗುವುದು.<br>ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 19357 ಹಾಗೂ ಪ್ರೌಢ ಶಾಲೆಗಳಲ್ಲಿ 2697 ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ. ಸದರಿ ಶೈಕ್ಷಣಿಕ ವರ್ಷದ ಮದ್ಯದಲ್ಲಿ ನಿವೃತ್ತರಾಗುವ ಪ್ರಾಥಮಿಕ ಮತ್ತು ಪ್ರೌಢಶಿಕ್ಷಕರ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಮುಂದುವರೆಸುವ ಮೂಲಕ ಶಿಕ್ಷಣದ ಗುಣಮಟ್ಟ ಕುಸಿಯದಂತೆ ಕ್ರಮವಹಿಸಲಾಗಿದೆ. |
| ಇ. | ಶಿಕ್ಷಕರ ಹುದ್ದೆಗಳು ಖಾಲಿ ಇರುವುದರಿಂದ ಹಾಗೂ ಪ್ರತಿ ವರ್ಷ ನಿವೃತ್ತಿಯಾಗಿ ಖಾಲಿ ಆಗುತ್ತಿರುವುದರಿಂದ ಈ ಹುದ್ದೆಗಳನ್ನು ತುಂಬದಿರುವ ಕಾರಣ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ತೆಗೆದುಕೊಂಡಿರುವ ಕ್ರಮಗಳೇನು;(ವಿವರ ನೀಡುವುದು) | |
| ಈ. | ಮಂಡ್ಯ ಜಿಲ್ಲೆಯಲ್ಲಿ ಖಾಲಿ ಇರುವ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಕರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) | ಮಂಡ್ಯ ಜಿಲ್ಲೆಯಲ್ಲಿ ಖಾಲಿ ಇರುವ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಕರ ಹುದ್ದೆಗಳ ವಿವರ :- |

| ಕ್ರ.ಸಂ. | ತಾಲ್ಲೂಕು | ಪ್ರಾಥಮಿಕ | ಪ್ರೌಢ |
|---|---|---|---|
| 1. | ಕೆ.ಆರ್.ಪೇಟೆ | 80 | 30 |
| 2. | ಮದ್ದೂರು | 110 | 29 |
| 3. | ಮಳವಳ್ಳಿ | 145 | 34 |
| 4. | ಮಂಡ್ಯ ದಕ್ಷಿಣ | 13 | 12 |
| 5. | ಮಂಡ್ಯ ಉತ್ತರ | 90 | 30 |

| | | | | | |
|---|---|---|---|---|---|
| | | 6. | ನಾಗಮಂಗಲ | 190 | 35 |
| | | 7. | ಪಾಂಡವಪುರ | 55 | 15 |
| | | 8. | ಶ್ರೀರಂಗಪಟ್ಟಣ | 15 | 08 |
| | | | **ಒಟ್ಟು =** | **698** | **193** |

**ಇಡಿ 92 ಪಿಎಂಎ 2018**

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ